ಕರ್ನಾಟಕ ಸರ್ಕಾರ

**ಸಾರ್ವಜನಿಕ ಶಿಕ್ಷಣ ಇಲಾಖೆಯ ಅಪರ ಆಯುಕ್ತರ ಕಛೇರಿ, ಐವಾನ–ಎ–ಶಾಹಿ ಬಡಾವಣೆ, ಕಲಬುರಗಿ**

ಸಂಖ್ಯೆ:ಸಿ1(1):ಆಡಳಿತ:ಸಿಬ್ಬಂದಿ:ಅಧೀಕ್ಷಕ::ಮುಂಬಡ್ತಿ/20/2016–17 ದಿನಾಂಕ:26/08/2016

::ಜ್ಞಾಪನ::

ವಿಷಯ:– ಸಾರ್ವಜನಿಕ ಶಿಕ್ಷಣ ಇಲಾಖೆಯ ಕಲಬುರಗಿ ಆಯುಕ್ತಾಲಯ ವ್ಯಾಪ್ತಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಅಧೀಕ್ಷಕರಿಗೆ ಪತ್ರಾಂಕಿತ ವ್ಯವಸ್ಥಾಪಕರ ಗ್ರೂಪ್ 'ಬಿ' ವೃಂದದ ಹುದ್ದೆಗಳಿಗೆ ಸ್ಥಾನಪನ್ನ ಬಡ್ತಿ ನೀಡುವ ಕುರಿತು.

ಉಲ್ಲೇಖ:–1)ಸರ್ಕಾರದ ಆದೇಶ ಸಂಖ್ಯೆ:ಇಡಿ:250:ಡಿಪಿಐ:2006 ದಿನಾಂಕ:22/02/2008.
2)ಸರ್ಕಾರದ ಆದೇಶ ಸಂಖ್ಯೆ:ಇಡಿ:464:ಡಿಪಿಐ:2008 ದಿನಾಂಕ:06/01/2009.
3)ದಿನಾಂಕ:19/08/2016 ರಂದು ನಡೆದ ಇಲಾಖಾ ಮುಂಬಡ್ತಿ ಸಮಿತಿ ಸಭೆಯ ನಡುವಳಿಗಳು.

= = = = =

**ಪ್ರಸ್ತಾವನೆ:**

ಸಾರ್ವಜನಿಕ ಶಿಕ್ಷಣ ಇಲಾಖೆಯ ಕಲಬುರಗಿ ಆಯುಕ್ತಾಲಯ ಆಡಳಿತ ವ್ಯಾಪ್ತಿಯಲ್ಲಿ ಬರುವ ಗ್ರೂಪ್ 'ಬಿ' ವೃಂದದ ಪತ್ರಾಂಕಿತ ವ್ಯವಸ್ಥಾಪಕರು ಹಾಗೂ ತತ್ಸಮಾನ ವೃಂದದ ಹುದ್ದೆಗಳಿಗೆ ಉಲ್ಲೇಖ–(01)ರ ಸರ್ಕಾರದ ಆದೇಶದಂತೆ ಆಯುಕ್ತರು , ಸಾರ್ವಜನಿಕ ಶಿಕ್ಷಣ ಇಲಾಖೆ ಕಲಬುರಗಿ ರವರನ್ನು ನೇಮಕಾತಿ ಪ್ರಾಧಿಕಾರಿಯನ್ನಾಗಿ ನೇಮಿಸಿ ಆದೇಶಿಸಲಾಗಿದೆ.

ಗ್ರೂಪ್ "ಬಿ" ವೃಂದದ ಹುದ್ದೆಗಳಿಗೆ ಬಡ್ತಿ ನೀಡುವ ಸಲುವಾಗಿ ಆಯುಕ್ತಾಲಯವಾರು ಇಲಾಖಾ ಮುಂಬಡ್ತಿ ಸಮಿತಿಯನ್ನು ಉಲ್ಲೇಖಿತ (02) ರ ಸರ್ಕಾರದ ಆದೇಶದನ್ವಯ ರಚಿಸಿ ಆದೇಶಿಸಿಲಾಗಿದೆ. ಅದರಂತೆ ಕಲಬುರಗಿ ಆಯುಕ್ತಾಲಯದ ಆಡಳಿತ ವ್ಯಾಪ್ತಿಯಲ್ಲಿ ಬರುವ ಪತ್ರಾಂಕಿತ ವ್ಯವಸ್ಥಾಪಕರು ಹಾಗೂ ತತ್ಸಮಾನ ವೃಂದದ ಖಾಲಿ ಇರುವ ಹುದ್ದೆಗಳಿಗೆ ಅಧೀಕ್ಷಕರ ಹುದ್ದೆಯಿಂದ ಪತ್ರಾಂಕಿತ ವ್ಯವಸ್ಥಾಪಕರು ಹಾಗೂ ತತ್ಸಮಾನ ವೃಂದದ ಗ್ರೂಪ್ 'ಬಿ' ವೃಂದದ ಹುದ್ದೆಗಳಿಗೆ ಬಡ್ತಿ ನೀಡುವ ಸಂಬಂಧವಾಗಿ ಉಲ್ಲೇಖ–(03) ರಂತೆ ದಿನಾಂಕ: 19/08/2016 ರಂದು ಆಯುಕ್ತರು ಸಾರ್ವಜನಿಕ ಶಿಕ್ಷಣ ಇಲಾಖೆ ಕಲಬುರಗಿ ಇವರ ಅಧ್ಯಕ್ಷತೆಯಲ್ಲಿ ಇಲಾಖಾ ಮುಂಬಡ್ತಿ ಸಭೆಯನ್ನು ನಡೆಸಲಾಯಿತು.

ಸದರಿ ಸಭೆಯಲ್ಲಿ ಸ್ಥಳೀಯ ವೃಂದದಲ್ಲಿ ಖಾಲಿ ಇರುವ ಪತ್ರಾಂಕಿತ ವ್ಯವಸ್ಥಾಪಕರು ಹಾಗೂ ತತ್ಸಮಾನ ವೃಂದದ ಗ್ರೂಪ್ 'ಬಿ' ವೃಂದದ ಹುದ್ದೆಗಳಿಗೆ ಸ್ಥಾನಪನ್ನ ಬಡ್ತಿ ನೀಡಿ ಸ್ಥಳ ನಿಯುಕ್ತಿಗೊಳಿಸುವ ಸಂಬಂಧ ಈ ಕೆಳಕಂಡ ಆದೇಶ.

**ಆದೇಶ:–**

ಸಾರ್ವಜನಿಕ ಶಿಕ್ಷಣ ಇಲಾಖೆಯ ಗ್ರೂಪ್–ಸಿ ವೃಂದದ ವೇತನ ಶ್ರೇಣಿ ₹ 20000–36300ರಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಅಧೀಕ್ಷಕರುಗಳಿಗೆ ಅನುಬಂಧದಲ್ಲಿ ತೋರಿಸಿದ ಗ್ರೂಪ್–ಬಿ ವೃಂದದ ವೇತನ ಶ್ರೇಣಿ ₹ 21600–40050ರ ಪತ್ರಾಂಕಿತ ವ್ಯವಸ್ಥಾಪಕರು ಹಾಗೂ ತತ್ಸಮಾನ ವೃಂದದ ಹುದ್ದೆಗಳಿಗೆ ಸ್ಥಾನಪನ್ನ ಬಡ್ತಿ ನೀಡಿ, ಅವರುಗಳ ಹೆಸರಿನ ಮುಂದೆ ಸೂಚಿಸಿದ ಹುದ್ದೆ ಮತ್ತು ಸ್ಥಳಗಳಿಗೆ ತಕ್ಷಣದಿಂದ ಜಾರಿಗೆ ಬರುವಂತೆ ಹಾಗೂ ಮುಂದಿನ ಆದೇಶದವರೆಗೆ ಈ ಕೆಳಕಂಡ ಷರತ್ತುಗಳಿಗೆ ಒಳಪಟ್ಟು ಸ್ಥಳ ನಿಯುಕ್ತಿಗೊಳಿಸಿ ಆದೇಶಿಸಲಾಗಿದೆ.

ಷರತ್ತುಗಳು:

1) ಈ ಆದೇಶ ತಲುಪಿದ 15 ದಿನಗಳ ಒಳಗಾಗಿ ಬಡ್ತಿ ನೀಡಿ ನಿಯುಕ್ತಿಗೊಳಿಸಿರುವ ಸ್ಥಳದಲ್ಲಿ ಕರ್ತವ್ಯಕ್ಕೆ ಹಾಜರಾಗುವುದು ತಪ್ಪಿದ್ದಲ್ಲಿ ನಿಯಮಾನುಸಾರ ಬಡ್ತಿಯನ್ನು ರದ್ದುಪಡಿಸಲಾಗುವುದು.
2) ಅನುಬಂಧದಲ್ಲಿರುವ ನೌಕರರು ಪತ್ರಾಂಕಿತ ವ್ಯವಸ್ಥಾಪಕರ ಗ್ರೂಪ್ 'ಬಿ' ವೃಂದದ ಹುದ್ದೆಯಲ್ಲಿ ಕರ್ತವ್ಯಕ್ಕೆ ವರದಿ ಮಾಡಿಕೊಂಡ ದಿನಾಂಕದಿಂದ ಕರ್ನಾಟಕ ನಾಗರಿಕ ಸೇವಾ ನಿಯಮ 42(ಬಿ) ರನ್ವಯ ವೇತನ ನಿಗದಿಗೆ ಅರ್ಹರಿರುತ್ತಾರೆ.
3) ನಿಗದಿಪಡಿಸಿರುವ ಎಲ್ಲಾ ಇಲಾಖಾ ಪರೀಕ್ಷೆಗಳನ್ನು ತೇರ್ಗಡೆ ಹೊಂದಿರುವ ಬಗ್ಗೆ ಬಿಡುಗಡೆ ಮಾಡುವ ಕಛೇರಿಯ ಮುಖ್ಯಸ್ಥರು ಸೂಕ್ತ ದಾಖಲೆಗಳನ್ನು ಪರಿಶೀಲಿಸಿ ಖಚಿತಪಡಿಸಿಕೊಳ್ಳುವುದು.
4) ಈ ನೌಕರರ ಮೇಲೆ ಶಿಸ್ತು ಪ್ರಕರಣ, ಇಲಾಖಾ ವಿಚಾರಣೆ, ನ್ಯಾಯಾಂಗ ಪ್ರಕರಣ ಬಾಕಿ ಇರುವಂತಿಲ್ಲ. ಸದರಿ ಹುದ್ದೆಯಿಂದ ಬಿಡುಗಡೆ ಮಾಡುವ ಮುನ್ನ ಇದನ್ನು ಖಚಿತಪಡಿಸಿಕೊಳ್ಳುವುದು.
5) ಮೇಲಿನ ಎಲ್ಲಾ ಷರತ್ತುಗಳನ್ನು ಕಡ್ಡಾಯವಾಗಿ ಪಾಲಿಸಿರತಕ್ಕದ್ದು, ಈ ಷರತ್ತುಗಳು ಪೂರೈಕೆ ಆಗದಿದ್ದಂತಹ ನೌಕರರುಗಳನ್ನು ಸ್ಥಾನಪನ್ನ ಬಡ್ತಿಗೆ ಪರಿಗಣಿಸಬಾರದೆಂದು ಸ್ಪಷ್ಟಪಡಿಸಿದೆ.
6) ಪತ್ರಾಂಕಿತ ವ್ಯವಸ್ಥಾಪಕರ ಹುದ್ದೆಗೆ ಬಡ್ತಿ ನೀಡುವಾಗ ತಪ್ಪಾಗಿ ಮಾಹಿತಿಯನ್ನು ನೀಡಿದ್ದಲ್ಲಿ ಯಾವುದೇ ಮೂನ್ಸೂಚನೆ ಇಲ್ಲದೇ ಬಡ್ತಿಯನ್ನು ಹಿಂಪಡೆಯಲಾಗುವುದು.

(ರಾಧಾಕೃಷ್ಣರಾವ್ ಮದನಕರ್)
ಅಪರ ಆಯುಕ್ತರು
ಸಾರ್ವಜನಿಕ ಶಿಕ್ಷಣ ಇಲಾಖೆ
ಕಲಬುರಗಿ

ಪ್ರತಿಗಳು:-

1) ಮಹಾಲೇಖಪಾಲರು, ಕರ್ನಾಟಕ ರಾಜ್ಯ, ಬೆಂಗಳೂರು-1
2) ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ) ಶಿಕ್ಷಣ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು-1
3) ಆಯುಕ್ತರು ಸಾರ್ವಜನಿಕ ಶಿಕ್ಷಣ ಇಲಾಖೆ ಬೆಂಗಳೂರು / ಧಾರವಾಡ.
4) ಕಲಬುರಗಿ ವಿಭಾಗದ ಎಲ್ಲಾ ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ.
5) ಕಲಬುರಗಿ ವಿಭಾಗದ ಸಾರ್ವಜನಿಕ ಶಿಕ್ಷಣ ಇಲಾಖೆಯ ಎಲ್ಲಾ ಜಿಲ್ಲಾಉಪನಿರ್ದೇಶಕರುಗಳಿಗೆ.
6) ಕಲಬುರಗಿ ವಿಭಾಗದ ಎಲ್ಲಾ ಜಿಲ್ಲಾ ಶಿಕ್ಷಣ ಮತ್ತು ತರಬೇತಿ ಸಂಸ್ಥೆಯ ಪ್ರಾಂಶುಪಾಲರಿಗೆ.
7) ವಿಭಾಗದ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ.
8) ಸಂಬಂಧಿಸಿದ ಸಂಸ್ಥೆ / ಕಛೇರಿ ಮುಖ್ಯಸ್ಥರಿಗೆ.
9) ಸಂಬಂಧಿಸಿದ ಅಧಿಕಾರಿ/ ನೌಕರರರಿಗೆ.
10) ಕಛೇರಿ ಪ್ರತಿ.

ಕರ್ನಾಟಕ ಸರ್ಕಾರ

## ಸಾರ್ವಜನಿಕ ಶಿಕ್ಷಣ ಇಲಾಖೆಯ ಅಪರ ಆಯುಕ್ತರ ಕಛೇರಿ, ಐವಾನ-ಎ-ಶಾಹಿ ಬಡಾವಣೆ, ಕಲಬುರಗಿ

ದಿನಾಂಕ:26/08/2016

ಸಂಖ್ಯೆ:ಸಿ1(1):ಆಡಳಿತ:ಸಿಬ್ಬಂದಿ:ಅಧೀಕ್ಷಕ::ಮುಂಬಡ್ತಿ/20/2016-17

--::ಅನುಬಂಧ::--

ಸಾರ್ವಜನಿಕ ಶಿಕ್ಷಣ ಇಲಾಖೆಯ ಕಲಬುರಗಿ ಆಯುಕ್ತಾಲಯ ವ್ಯಾಪ್ತಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಅಧೀಕ್ಷಕರಿಗೆ ಪತ್ರಾಂಕಿತ ವ್ಯವಸ್ಥಾಪಕರ ಗ್ರೂಪ್ 'ಬಿ' ವೃಂದದ ಹುದ್ದೆಗಳಿಗೆ ಸ್ಥಾನಪನ್ನ ಬಡ್ತಿ ಸ್ಥಳ ನಿಯುಕ್ತಿಗೊಳಿಸಿದ ಪಟ್ಟಿ

| ಕ್ರ.ಸಂ | ಜೇಷ್ಠತಾ ಸಂಖ್ಯೆ | ನೌಕರರ ಹೆಸರು, ಮತ್ತು ಕಾರ್ಯನಿರ್ವಹಿಸುತ್ತಿರುವ ವಿಳಾಸ | ಪತ್ರಾಂಕಿತ ವ್ಯವಸ್ಥಾಪಕರ ಹುದ್ದೆಗೆ ಸ್ಥಾನಪನ್ನ ಬಡ್ತಿ ನೀಡಿ ಸ್ಥಳ ನಿಯುಕ್ತಿಗೊಳಿಸಿರುವ ಕಛೇರಿ ವಿಳಾಸ | ವೃಂದ |
|---|---|---|---|---|
| 01 | 02 | 03 | 04 | 05 |
| 1 | 9 | ಶ್ರೀ ಎಸ್ ಎಂ ಜಿತೇಂದ್ರಿಯ ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿ ಬಳ್ಳಾರಿ ಪೂರ್ವ | ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿ ಶೋರಾಪೂರ ಜಿ:ಯಾದಗೀರಿ | ಸ್ಥಳಿಯ |
| 2 | 10 | ಶ್ರೀ ಪ್ರಾಣೇಶಾಚಾರ್ಯ ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿ ಲಿಂಗಸುಗೂರು ಜಿ ರಾಯಚೂರು | ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿ ಲಿಂಗಸೂಗೂರು ಜಿ:ರಾಯಚೂರು | ಸ್ಥಳಿಯ |
| 3 | 11 | ಶ್ರೀ ರಾಜೀವ ಜಿಲ್ಲಾ ಶಿಕ್ಷಣ ಮತ್ತು ತರಬೇತಿ ಸಂಸ್ಥೆ (ಡಯಟ್) ಯರಮರಸ್ ಜಿ:ರಾಯಚೂರು | ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿ ಅಪಜಲಪೂರ ಜಿ:ಕಲಬುರಗಿ | ಸ್ಥಳಿಯ |
| 4 | 12 | ಶ್ರೀ ವೆಂಕಟೇಶ ಉಪ ನಿರ್ದೇಶಕರ ಕಛೇರಿ ಸಾರ್ವಜನಿಕ ಶಿಕ್ಷಣ ಇಲಾಖೆ ಕೊಪ್ಪಳ | ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿ ಕುಷ್ಟಗಿ ಜಿ: ಕೊಪ್ಪಳ | ಸ್ಥಳಿಯ |
| 5 | 13 | ಶ್ರೀ ಆರ್.ಎಂ ತುಕಾರಾಂ ನಾಯ್ಕ ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿ ಕುಷ್ಟಗಿ ಜಿ: ಕೊಪ್ಪಳ | ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿ ಭಾಲ್ಕಿ ಜಿ:ಬೀದರ | ಸ್ಥಳಿಯ |
| 6 | 15 | ಶ್ರೀ ಲಿಂಗಪ್ಪ ಉಪ ನಿರ್ದೇಶಕರ ಕಛೇರಿ ಸಾರ್ವಜನಿಕ ಶಿಕ್ಷಣ ಇಲಾಖೆ ರಾಯಚೂರು | ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿ ದೇವದುರ್ಗ ಜಿ:ರಾಯಚೂರು | ಸ್ಥಳಿಯ |

(ರಾಧಾಕೃಷ್ಣರಾವ ಮದನಕರ್)
ಅಪರ ಆಯುಕ್ತರು
ಸಾರ್ವಜನಿಕ ಶಿಕ್ಷಣ ಇಲಾಖೆ
ಕಲಬುರಗಿ